# ತುಮಕೂರು ವಿಶ್ವವಿದ್ಯಾನಿಲಯ

ಪರೀಕ್ಷಾ ಭವನ, ಬಿ.ಹೆಚ್. ರಸ್ತೆ, ತುಮಕೂರು-572 103 ☏ : 0816 – 2255650 , 2273511 ಫ್ಯಾಕ್ಸ್ : 0816-2270719


**ಸಂಖ್ಯೆ:ತುವಿ:ಪವಿ:**2024–25/ 145 **ದಿನಾಂಕ:**29.05.2024

**ತುರ್ತು**

# ಸುತ್ತೋಲೆ

**ವಿಷಯ :** ತುಮಕೂರು ವಿಶ್ವವಿದ್ಯಾನಿಲಯವು ನಿಗದಿಪಡಿಸಿರುವ ಎಲ್ಲಾ ಪರೀಕ್ಷಾ ಕೇಂದ್ರಗಳಲ್ಲಿನ ಎಲ್ಲಾ ಪರೀಕ್ಷಾ ಕೊಠಡಿಗಳಲ್ಲಿ ಕಡ್ಡಾಯವಾಗಿ ಸಿ.ಸಿ.ಟಿ.ವಿ. ಅಳವಡಿಸುವಂತೆ ಮತ್ತೊಮ್ಮೆ ತಿಳಿಸುತ್ತಿರುವ ಕುರಿತು.

**ಉಲ್ಲೇಖ :** 1. ದಿನಾಂಕ:21.02.2024 ರಂದು ನಡೆದ ವಿದ್ಯಾವಿಷಯಕ ಪರಿಷತ್ ಸಭಾ ನಿರ್ಣಯ
2. ದಿನಾಂಕ:21.02.2024 ರಂದು ನಡೆದ ಸಿಂಡಿಕೇಟ್ ಸಭಾ ನಿರ್ಣಯ
3. ಈ ಕಚೇರಿ ಸುತ್ತೋಲೆ ಸಂಖ್ಯೆ:ತುವಿ:ಪವಿ:2023–24/1260 ದಿನಾಂಕ:13.03.2024

* * * * * * *

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಪರೀಕ್ಷಾ ಕಾರ್ಯಗಳಲ್ಲಿ ಪಾರದರ್ಶಕತೆಯನ್ನು ತರುವ ಸದುದ್ದೇಶದಿಂದ, ತುಮಕೂರು ವಿಶ್ವವಿದ್ಯಾನಿಲಯವು ನಿಗದಿಪಡಿಸುವ ಎಲ್ಲಾ ಪರೀಕ್ಷಾ ಕೇಂದ್ರಗಳಲ್ಲಿ (ಎಲ್ಲಾ ಪರೀಕ್ಷಾ ಕೊಠಡಿಗಳಲ್ಲಿ) ಸಿ.ಸಿ.ಟಿ.ವಿ. ಅಳವಡಿಸಿ, ಸದರಿ ಪರೀಕ್ಷಾ ಕೇಂದ್ರಗಳನ್ನು ವಿಶ್ವವಿದ್ಯಾನಿಲಯದಿಂದಲೇ ಆನ್‌ಲೈನ್ ಮೂಲಕ ಪರಿವೀಕ್ಷಿಸಲು ಕ್ರಮವಹಿಸುವಂತೆ ಉಲ್ಲೇಖ (1) & (2) ರನ್ವಯ ದಿನಾಂಕ:21.02.2024 ರಂದು ನಡೆದ ವಿದ್ಯಾವಿಷಯಕ ಪರಿಷತ್ ಹಾಗೂ ಸಿಂಡಿಕೇಟ್ ಸಭೆಗಳು ಸೂಚಿಸಿರುತ್ತವೆ. ಈ ಹಿನ್ನೆಲೆಯಲ್ಲಿ ಸ್ನಾತಕೋತ್ತರ ಅಧ್ಯಯನ ಮತ್ತು ಸಂಶೋಧನಾ ವಿಭಾಗಗಳು, ಘಟಕ/ಸ್ನಾತಕ/ಸ್ನಾತಕ ಶಿಕ್ಷಣ ಪದವಿ ಕಾಲೇಜುಗಳಲ್ಲಿ ತುಮಕೂರು ವಿಶ್ವವಿದ್ಯಾನಿಲಯವು ನಿಗದಿಪಡಿಸಿರುವ ತಮ್ಮ ಪರೀಕ್ಷಾ ಕೇಂದ್ರದಲ್ಲಿನ ಎಲ್ಲಾ ಪರೀಕ್ಷಾ ಕೊಠಡಿಗಳಲ್ಲಿ ದಿನಾಂಕ:30.04.2024 ರೊಳಗೆ ಸಿ.ಸಿ.ಟಿ.ವಿ. ಅಳವಡಿಸಿ, ಅಳವಡಿಸಿರುವ ಕುರಿತು ಕೂಡಲೇ ವರದಿಯನ್ನು ವಿಶ್ವವಿದ್ಯಾನಿಲಯಕ್ಕೆ ಸಲ್ಲಿಸುವಂತೆ ಈಗಾಗಲೇ ಉಲ್ಲೇಖ (3) ರ ಈ ಕಚೇರಿ ಸುತ್ತೋಲೆಯಲ್ಲಿ ತಮಗೆ ತಿಳಿಸಲಾಗಿತ್ತು. ಆದಾಗ್ಯೂ ಬಹುತೇಕ ಕಾಲೇಜು/ವಿಭಾಗಗಳಲ್ಲಿ ಇದುವರೆವಿಗೂ ಸಿ.ಸಿ.ಟಿ.ವಿ. ಅಳವಡಿಸಿರುವ ಕುರಿತು ಪರೀಕ್ಷಾ ವಿಭಾಗಕ್ಕೆ ಯಾವುದೇ ಮಾಹಿತಿ ಲಭ್ಯವಿರುವುದಿಲ್ಲ. ತತ್ಸಂಬಂಧ, ಸದರಿ ವಿಷಯವನ್ನು ವಿಶ್ವವಿದ್ಯಾನಿಲಯವು ಗಂಭೀರವಾಗಿ ಪರಿಗಣಿಸಿದ್ದು ಈ ಹಿನ್ನೆಲೆಯಲ್ಲಿ **ವಿಶ್ವವಿದ್ಯಾನಿಲಯವು ನಿಗದಿಪಡಿಸಿರುವ ತಮ್ಮ ಪರೀಕ್ಷಾ ಕೇಂದ್ರದಲ್ಲಿನ ಎಲ್ಲಾ ಪರೀಕ್ಷಾ ಕೊಠಡಿಗಳಲ್ಲಿ ಕಡ್ಡಾಯವಾಗಿ ದಿನಾಂಕ:15.06.2024 ರೊಳಗೆ ಸಿ.ಸಿ.ಟಿ.ವಿ. ಅಳವಡಿಸಿ ವರದಿಯನ್ನು ವಿಶ್ವವಿದ್ಯಾನಿಲಯಕ್ಕೆ ಸಲ್ಲಿಸುವಂತೆ** ಈ ಮೂಲಕ ತಮಗೆ ಮತ್ತೊಮ್ಮೆ ತಿಳಿಸಲಾಗಿದೆ.

ಸಹಿ/-
**ಕುಲಸಚಿವರು(ಮೌಲ್ಯಮಾಪನ)**

ಕುಲಸಚಿವರು (ಮೌಲ್ಯಮಾಪನ)
ತುಮಕೂರು ವಿಶ್ವವಿದ್ಯಾನಿಲಯ
ತುಮಕೂರು

**ಗೆ,**

ಅಧ್ಯಕ್ಷರು/ಸಂಯೋಜಕರು/ಪ್ರಾಂಶುಪಾಲರುಗಳು, ಸಂಬಂಧಿಸಿದ ಸ್ನಾತಕೋತ್ತರ ಅಧ್ಯಯನ ಮತ್ತು ಸಂಶೋಧನಾ ವಿಭಾಗಗಳು/ಘಟಕ/ಸ್ನಾತಕ ಪದವಿ/ಸ್ನಾತಕ ಶಿಕ್ಷಣ ಪದವಿ ಕಾಲೇಜುಗಳಲ್ಲಿನ ಎಲ್ಲಾ ಪರೀಕ್ಷಾ ಕೇಂದ್ರಗಳು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.

**ಪ್ರತಿಗಳು :**

1. ಮಾನ್ಯ ಹಣಕಾಸು ಅಧಿಕಾರಿಗಳು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
2. ಮಾನ್ಯ ಕುಲಪತಿಯವರ ಆಪ್ತ ಕಾರ್ಯದರ್ಶಿಗಳು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
3. ಮಾನ್ಯ ಕುಲಸಚಿವರ ಆಪ್ತ ಸಹಾಯಕರು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
4. ಸಿಸ್ಟಂ ಅನಾಲಿಸ್ಟ್, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು – **ವಿಶ್ವವಿದ್ಯಾನಿಲಯದ ಜಾಲತಾಣದಲ್ಲಿ ಪ್ರಕಟಿಸುವುದು ಹಾಗೂ ಸಂಬಂಧಿಸಿದ ಪರೀಕ್ಷಾ ಕೇಂದ್ರಗಳಲ್ಲಿನ ಅಧ್ಯಕ್ಷರು/ಸಂಯೋಜಕರು/ಪ್ರಾಂಶುಪಾಲರುಗಳಿಗೆ ಇಮೇಲ್ ಕಳುಹಿಸುವುದು.**
5. ಕಛೇರಿ ಪ್ರತಿ.